ಅವಶ್ಯಕತೆಗನುಗುಣವಾಗಿ ಉತ್ತರ ಮತ್ತು ದಕ್ಷಿಣ ವಲಯಗಳ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮುಖ್ಯರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಸುಮಾರು ರೂ.100.00ಕೋಟಿಗಳಷ್ಟು ಅಂದಾಜು ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗಿದೆ.

"ಮೂರು ವರ್ಷಗಳ ರಾಜ್ಯ ಹೆದ್ದಾರಿ ನಿರ್ವಹಣೆ" ಅಡಿಯಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ ಮೂಲಕ ಸುಮಾರು 14000 ಕಿ.ಮೀ. ರಾಜ್ಯ ಹೆದ್ದಾರಿಗಳ ನಿರ್ವಹಣೆಗಾಗಿ ಒಟ್ಟು ರೂ.45800.00ಲಕ್ಷಗಳ ಕಾಮಗಾರಿಗಳನ್ನು ಜಿಲ್ಲಾವಾರು ಕೈಗೆತ್ತಿಕೊಳ್ಳಲಾಗಿದೆ. ಒಂದು ವರ್ಷಕ್ಕೆ ಒಂದು ಕಿ.ಮೀ. ಉದ್ದ ರಾಜ್ಯ ಹೆದ್ದಾರಿ ನಿರ್ವಹಣೆಗಾಗಿ ರೂ.1.09ಲಕ್ಷಗಳ ವೆಚ್ಚ ಮಾಡಲಾಗುವುದು. ಹಾಗೂ ಮೂರು ವರ್ಷಕ್ಕೆ ಸೇರಿ ಒಟ್ಟು ರೂ.327ಲಕ್ಷಗಳನ್ನು ಒಂದು ಕಿ.ಮೀ. ನಿರ್ವಹಣೆಗಾಗಿ ವೆಚ್ಚ ಮಾಡಲಾಗುವುದು.

2005–06ನೇ ಸಾಲಿಗೆ "ಕೇಂದ್ರ ರಸ್ತೆ ನಿಧಿ" ಅಡಿಯಲ್ಲಿ ರೂ.10724.00 ಲಕ್ಷಗಳ ಅನುದಾನ ನಿಗಧಿಪಡಿಸಿದ್ದು ಜಿಲ್ಲಾ ಮುಖ್ಯರಸ್ತೆಗಳ ಮತ್ತು ರಾಜ್ಯ ಹೆದ್ದಾರಿಗಳ ಕಾಮಗಾರಿಗಳ ಪ್ರಗತಿಯನ್ನಾಧರಿಸಿ ಹಣ ಬಿಡುಗಡೆ ಮಾಡಲಾಗಿದೆ ಹಾಗೂ ಆಯವ್ಯಯದಲ್ಲಿ ಲೋಕೋಪಯೋಗಿ ಇಲಾಖೆಗೆ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಮಳೆಹಾನಿಯಿಂದ ಹಾಳಾದ ರಸ್ತೆಗಳ ದುರಸ್ತಿ ಕಾಮಗಾರಿಯನ್ನು ಹಾಗೂ ರಸ್ತೆಯ ಸ್ಥಿತಿಯನುಸಾರ ಗುಂಡಿ ಮುಚ್ಚುವುದು, ರಸ್ತೆ ಬಲಪಡಿಸುವುದು, ಅಡ್ಡಮೋರಿಗಳ ದುರಸ್ತಿ ಮತ್ತು ಅಭಿವೃದ್ಧಿಪಡಿಸುವುದು, ಮರುನಿರ್ಮಾಣ ಇತರೆ ಕೆಲಸಗಳನ್ನು ಅವಶ್ಯಕತೆ ಗನುಗುಣವಾಗಿ ನಿಗದಿತ ಕಾಲಾವಧಿಯಲ್ಲಿ ಇಲಾಖಾ ನಿಯಮಾವಳಿಯ ಅನುಸಾರ ಕಾರ್ಯಗತಗೊಳಿಸಲಾಗುತ್ತಿದೆ.

30, (128) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಉಪ ಗ್ರಾಮ ಯೋಜನೆಯಡಿಯಲ್ಲಿ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಿಕೊಡಲಾಗಿದೆ;

ಆ) ವಿದ್ಯುತ್ ಸಂಪರ್ಕ ಇಲ್ಲದಿರುವ ಇಂಥ ಕಾಲೋನಿಗಳಿಗೆ ಯಾವ ಯೋಜನೆಗಳಡಿಯಲ್ಲಿ ವಿದ್ಯುತ್ ಸೌಲಭ್ಯವನ್ನು ಕಲ್ಪಿಸಿಕೊಡಲು ಸರಕಾರ ಕ್ರಮ ಜರುಗಿಸುವುದು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಉಪ ಗ್ರಾಮ ಯೋಜನೆಯಡಿಯಲ್ಲಿ ಬೆಳ್ತಂಗಡಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಇದುವರೆಗೆ 42 ಪರಿಶಿಷ್ಟ ಜಾತಿ ಹಾಗೂ 32 ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.

ಆ) ವಿದ್ಯುತ್ ಸಂಪರ್ಕ ಕಲ್ಪಿಸಬೇಕಾಗಿರುವ ಒಟ್ಟು 25 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳ ಪೈಕಿ 3 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳು ಈಗ ಪ್ರಗತಿಯಲ್ಲಿವೆ. ಉಳಿದ 22 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಕಾಲೋನಿಗಳನ್ನು ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ವಿದ್ಯುದೀಕರಿಸಲು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಉದ್ದೇಶಿಸಿದೆ.

31, (129) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ನೀಡುತ್ತಿರುವ ಅನುದಾನದ ವಿವರಗಳೇನು;

ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹಣವನ್ನು ಈ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆ;

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸ್ಥಳೀಯ ಸಂಸ್ಥೆಗಳಿಗೆ ಒದಗಿಸಲಾದ ಮೂಲಭೂತ ಸೌಕರ್ಯಗಳು ಯಾವುವು;

ಈ) ಬೆಳ್ತಂಗಡಿ ಪಟ್ಟಣ ಪಂಚಾಯತ್‌ಗೆ ಕಳೆದ ಎರಡು ವರ್ಷಗಳಲ್ಲಿ ಅನುಷ್ಠಾನಗೊಳಿಸಿದ ಮೂಲಭೂತ ಸೌಕರ್ಯಗಳು ಯಾವುವು;

ಉ) ಬೆಳ್ತಂಗಡಿ ಪಟ್ಟಣ ಪಂಚಾಯತ್ ಪ್ರದೇಶಾಭಿವೃದ್ಧಿಗಾಗಿ ಸರ್ಕಾರದವರು ಕೈಗೊಳ್ಳಲುದ್ದೇಶಿಸಿರುವ ಮೂಲಭೂತ ಸೌಕರ್ಯಾಭಿವೃದ್ಧಿಯ ಯೋಜನೆಗಳು ಯಾವುವು (ವಿವರ ನೀಡುವುದು)?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಎಸ್.ಎಫ್.ಸಿ. ಅಭಿವೃದ್ಧಿ ಅನುದಾನ 11ನೇ ಹಣಕಾಸು ಯೋಜನೆ ಮತ್ತು 12ನೇ ಹಣಕಾಸು ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡುತ್ತಿದೆ.